# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 930 |
| ಸದಸ್ಯರ ಹೆಸರು | ಶ್ರೀ ಯು.ಬಿ. ವೆಂಕಟೇಶ್ |
| ಉತ್ತರಿಸುವ ದಿನಾಂಕ | 24-07-2024 |
| ಉತ್ತರಿಸುವವರು | ಸಾರಿಗೆ ಮತ್ತು ಮುಜರಾಯಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಮೈಸೂರು ಜಿಲ್ಲೆ, ಟಿ.ನರಸೀಪುರ ತಾಲ್ಲೂಕು, ಮುಡುಕುತೊರೆ ಶ್ರೀ ಭ್ರಮರಾಂಭ ಸಮೇತ ಶ್ರೀ ಮಲ್ಲಿಕಾರ್ಜುನಸ್ವಾಮಿ ದೇವಸ್ಥಾನದ ಜೀರ್ಣೋದ್ಧಾರ ಕಾಮಗಾರಿಗೆ ಮಂಜೂರಾಗಿರುವ ಅನುದಾನ ಎಷ್ಟು; ಈವರೆಗೆ ಬಿಡುಗಡೆಯಾಗಿರುವ ಅನದಾನ ಎಷ್ಟು; | ಮೈಸೂರು ಜಿಲ್ಲೆ, ಟಿ.ನರಸೀಪುರ ತಾಲ್ಲೂಕು, ಮುಡುಕುತೊರೆ ಶ್ರೀ ಭ್ರಮರಾಂಭ ಸಮೇತ ಶ್ರೀ ಮಲ್ಲಿಕಾರ್ಜುನಸ್ವಾಮಿ ದೇವಸ್ಥಾನದ ಜೀರ್ಣೋದ್ಧಾರಕ್ಕಾಗಿ ಒಟ್ಟು ರೂ.340.00 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ. |
| ಆ) | ಸದರಿ ಕಾಮಗಾರಿಯನ್ನು ಗುತ್ತಿಗೆ ಪಡೆದಿರುವ ಸಂಸ್ಥೆ ಯಾವುದು; ಗುತ್ತಿಗೆದಾರರಿಗೆ ನಿಗದಿಪಡಿಸಿರುವ ಕಾಲಾವಧಿ ಎಷ್ಟು; ಪ್ರಸ್ತುತ ಕಾಮಗಾರಿಯು ಯಾವ ಹಂತದಲ್ಲಿದೆ; ಈವರೆಗೆ ಕಾಮಗಾರಿಗೆ ವ್ಯಯಿಸಿರುವ ಅನುದಾನ ಎಷ್ಟು; | ಸದರಿ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಲೋಕೋಪಯೋಗಿ ಇಲಾಖೆಗೆ ನೀಡಲಾಗಿರುತ್ತದೆ.<br><br>ಗುತ್ತಿಗೆದಾರರಿಗೆ ನಿಗದಿಪಡಿಸಿರುವ ಕಾಲಾವಧಿಯು ಮೂರು ವರ್ಷಗಳಾಗಿರುತ್ತದೆ. ಪ್ರಸ್ತುತ ಕಾಮಗಾರಿಯು ದೇವಾಲಯದ ಪಾಯದ ಕೆಲಸ ಹಾಗೂ ಕಲ್ಲಿನ ಕೆಲಸ ಕೆತ್ತನೆಗಾಗಿ ರೂ.340.00 ಲಕ್ಷಗಳನ್ನು ಬಳಸಿಕೊಳ್ಳಲಾಗಿರುತ್ತದೆ. |
| ಇ) | ಸರ್ಕಾರ ಜೀರ್ಣೋದ್ಧಾರ ಕಾಮಗಾರಿಯನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲು ಉದ್ದೇಶಿಸಿದೆ: | ದೇವಾಲಯದ ಜೀರ್ಣೋದ್ಧಾರ ಕಾಮಗಾರಿಯನ್ನು ಕೈಗೊಳ್ಳಲು ಸರ್ಕಾರದ ಆದೇಶ ಸಂಖ್ಯೆ. ಕಂಇ 12 ಮುಅಕಾ 2020, ದಿನಾಂಕ:21.11.2020 ರಲ್ಲಿ ಮೂರು ವರ್ಷಗಳಲ್ಲಿ ಪೂರ್ಣಗೊಳಿಸಲು ಆದೇಶಿಸಲಾಗಿರುತ್ತದೆ.<br><br>ಈಗಾಗಲೇ ಕಾಮಗಾರಿ ಅನುಷ್ಠಾನಕ್ಕಾಗಿ ಒಟ್ಟು ರೂ.340.00 ಲಕ್ಷಗಳನ್ನು ಲೋಕೋಪಯೋಗಿ ಇಲಾಖೆಗೆ ಬಿಡುಗಡೆ ಮಾಡಲಾಗಿದ್ದು, ಸದರಿ ಅನುದಾನವನ್ನು ಸಂಪೂರ್ಣವಾಗಿ ಬಳಸಿಕೊಂಡು ದೇವಾಲಯದ ಪಾಯದ ಕೆಲಸ ಪೂರ್ಣಗೊಳಿಸಿ ಕಲ್ಲಿನ ಕೆತ್ತನೆ ಪ್ರಗತಿಯಲ್ಲಿರುತ್ತದೆ. ಈ ದೇವಾಲಯದ ಕಾಮಗಾರಿಗೆ ಸಾರ್ವಜನಿಕ ವಂತಿಕೆಯಿಂದ ಸಂಗ್ರಹವಾಗಿರುವ ರೂ.200.00 ಲಕ್ಷ ಮತ್ತು ಪ್ರವಾಸೋದ್ಯಮ ಇಲಾಖೆಯಿಂದ ಮಂಜೂರಾಗಿರುವ ರೂ.200.00 ಲಕ್ಷಗಳ ಅನುದಾನವನ್ನು ಬಳಸಿಕೊಳ್ಳಲು ನಂತರ ದೇವಾಲಯದ ನಿಶ್ಚಿತ ಠೇವಣಿಯಲ್ಲಿರುವ ಹಣವನ್ನು ಬಳಸಿಕೊಂಡು ಕಾಮಗಾರಿಯನ್ನು ಪೂರ್ಣಗೊಳಿಸಲು ಅನುಮತಿ ನೀಡಲು ಕ್ರಮವಹಿಸಲಾಗುತ್ತಿದೆ. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಈ) | ಸದರಿ ದೇವಸ್ಥಾನವು ಅಪಾರ ಪ್ರಮಾಣದ ಭಕ್ತ ವೃಂದವನ್ನು ಹೊಂದಿರುವುದರಿಂದ ಅಭಿವೃದ್ಧಿಗೆ ಪೂರಕವಾಗುವಂತೆ ಸರ್ಕಾರವು ಪ್ರಾಧಿಕಾರ ರಚನೆಗೆ ಚಿಂತಿಸಿದೆಯೇ? (ವಿವರವನ್ನು ಒದಗಿಸುವುದು) | ಮೈಸೂರು ಜಿಲ್ಲೆ, ಟಿ.ನರಸೀಪುರ ತಾಲ್ಲೂಕು, ಮುಡುಕುತೊರೆ ಶ್ರೀ ಭ್ರಮರಾಂಭ ಸಮೇತ ಶ್ರೀ ಮಲ್ಲಿಕಾರ್ಜುನಸ್ವಾಮಿ ದೇವಸ್ಥಾನದ ಪ್ರಾಧಿಕಾರ ರಚನೆ ಮಾಡುವ ಪ್ರಸ್ತಾವನೆಯು ಸರ್ಕಾರದ ಮುಂದಿರುವುದಿಲ್ಲ. |

ಸಂಖ್ಯೆ: ಕಂಇ 102 ಮುಸಪ್ರ 2024

**(ರಾಮಲಿಂಗಾರೆಡ್ಡಿ)**
**ಸಾರಿಗೆ ಮತ್ತು ಮುಜರಾಯಿ ಸಚಿವರು**